ಇ) ಕ್ರೀಡೆಗಳಲ್ಲಿ ಉತ್ತಮ ಸ್ಥಾನವನ್ನು ಪಡೆದ ಕ್ರೀಡಾಪಟುಗಳನ್ನು ಅವರರ ಆರ್ಥಿಕ ಸ್ಥಿತಿಯನ್ನು ಪರಿಗಣಿಸಿ, ಆಯ್ಕೆ ಮಾಡಲಾಗುವುದು.

ಈ) ಸರ್ಕಾರದ ಪರಿಶೀಲನೆಯಲ್ಲಿದೆ.

ರಾಜ್ಯದದ ಕ್ರೀಡಾಪಟುಗಳು ವಲಸೆ ಹೋಗುತ್ತಿರುವುದರ ಬಗ್ಗೆ

894 - ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದ ಕ್ರೀಡಾಪಟುಗಳು ವಲಸೆ ಹೋಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು?

ಇ) ಕ್ರೀಡಾಪಟುಗಳು ವಲಸೆ ಹೋಗುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು?

ಶ್ರೀ ಅಜಯಕುಮಾರ್ ಸರ್. ನಾಯಕ್(ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) :

ಅ) ಹೌದು

ಆ) ಉತ್ತಮ ಕ್ರೀಡಾ ಪಟುಗಳಿಗೆ ಕರ್ನಾಟಕ ರಾಜ್ಯದಲ್ಲಿಯೇ ಒಳ್ಳೆಯ ಉದ್ಯೋಗಾವಕಾಶಗಳನ್ನು ಒದಗಿಸದೇ ಇರುವುದರಿಂದ.

ಇ) ಉತ್ತಮ ಕ್ರೀಡಾಪಟುಗಳಿಗೆ ನೇರನೇಮಕಾತಿ ಮೂಲಕ ಉದ್ಯೋಗಾವಕಾಶ ಕಲ್ಪಿಸಿಕೊಡುವ ಯೋಜನೆ ಸರ್ಕಾರದ ಪರಿಶೀಲನೆಯಲ್ಲಿದೆ.

ರಾಜ್ಯದಲ್ಲಿರುವ ಅನುದಾನಿತ ಹಾಗೂ ಅನುದಾನ ರಹಿತ ಪ್ರೌಢಶಾಲೆಗಳ ಸಂಖ್ಯೆ ಕುರಿತು

1030 - ಶ್ರೀ ರಾಮಲಿಂಗ ರೆಡ್ಡಿ (ಜಯನಗರ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಅನುದಾನಿತ ಹಾಗೂ ಅನುದಾನ ರಹಿತ ಪ್ರೌಢಶಾಲೆಗಳ ಸಂಖ್ಯೆ ಎಷ್ಟು?

ಆ) ಸರ್ಕಾರವು ಎಸ್.ಎಸ್. ಎಲ್.ಸಿ. ಪರೀಕ್ಷೆಯಲ್ಲಿ ಅತೀ ಹೆಚ್ಚಿನ ಸಂಖ್ಯೆಯ ರ್‍ಯಾಂಕಗಳನ್ನು ಪಡೆದ ಅನುದಾನಿತ ಅಥವಾ ಅನುದಾನ ರಹಿತ ಶಾಲಾ ಆಡಳಿತ ಮಂಡಳಿಯನ್ನು ಗೌರವಿಸುತ್ತಿದೆಯೇ?

ಇ) ಇಲ್ಲದಿದ್ದರೆ, ಸರ್ಕಾರವು ಯೋಜನೆ ಯೊಂದನ್ನು ರೂಪಿಸಿ ಎಸ್. ಎಸ್. ಎಲ್.ಸಿ. ಪರೀಕ್ಷೆಯಲ್ಲಿ ಅತೀ ಹೆಚ್ಚಿನ ಸಂಖ್ಯೆಯ ರ್‍ಯಾಂಕ್‌ಗಳನ್ನು ಪಡೆದ ಶಾಲೆಯ ಆಡಳಿತ ಮಂಡಳಿಯನ್ನು ಗೌರವಿಸಲು ಕ್ರಮಕೈಗೊಳ್ಳುವುದೇ?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ)

ಅನುದಾನಿತ ಪ್ರೌಢಶಾಲೆಗಳು	2528
ಅನುದಾನ ರಹಿತ ಶಾಲೆಗಳು	223
ಶಾಶ್ವತ ಅನುದಾನ ರಹಿತ ಪ್ರೌಢಶಾಲೆಗಳು	2452

ಆ) ಇಲ್ಲ

ಇ) ಪರಿಶೀಲಿಸಲಾಗುವುದು.